ಬುಧವಾರ 03.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 114
Digital Varthe Kannada Daily
Volume 01 - Issue 114
wednesday 03.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಇ.ಡಿ ಹೆಸರಲ್ಲಿ ಚಿನ್ನದ ವ್ಯಾಪಾರಿ ದರೋಡೆ ಕೇಸ್ ನಾಲ್ವರು ಅರೆಸ್ಟ್



**ಹುಬ್ಬಳ್ಳಿ:** ಇ.ಡಿ ಹೆಸರಲ್ಲಿ ಚಿನ್ನದ ವ್ಯಾಪಾರಿಯ ದರೋಡೆ ಪ್ರಕರಣ ಸಂಬಂಧ 4 ಜನ ಆರೋಪಿಗಳನ್ನ ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಮುಂಬೈನ ಅಂಕುಶ ಕದಂ, ಚಂದ್ರಶೇಖರ, ವಿಲಾಸ ಮೋಹಿತೆ ಹಾಗೂ ಗುಜರಾತ್‌ನ ವಡೋದರಾದ ಜಿಜ್ಞೇಶ್ ಕುಮಾರ್ ಬಂಧಿತ ಆರೋಪಿಗಳಾಗಿದ್ದಾರೆ. ಬಂಧಿತರಿಂದ 6,65,284 ರೂ. ಬೆಲೆಬಾಳುವ 56.26 ಗ್ರಾಂ ಚಿನ್ನದ ಒಡವೆಗಳು, 60 ಸಾವಿರ ರೂ. ನಗದು ಮತ್ತು 7 ಮೊಬೈಲ್ ಫೋನ್‌ಗಳನ್ನು ಜಪ್ತಿ ಮಾಡಲಾಗಿದೆ.

ಇ.ಡಿ ಅಧಿಕಾರಿಗಳ ಸೋಗಿನಲ್ಲಿ ಚಿನ್ನಾಭರಣ ಅಂಗಡಿಗಳಿಗೆ ಆಭರಣ ಪೂರೈಸುವ ವ್ಯವಹಾರ ಮಾಡುವ ಕೇರಳದ ವ್ಯಾಪಾರಿ ಸುದೀನ್ ಎಂ.ಆರ್. ಅವರನ್ನು ಹೆದರಿಸಿ, ಬರೋಬ್ಬರಿ 3 ಕೋಟಿ ರೂ. ಹೆಚ್ಚಿನ ಮೌಲ್ಯದ ಚಿನ್ನಾಭರಣ ದೋಚಿ ಗ್ಯಾಂಗ್ ಒಂದು ಪರಾರಿಯಾಗಿತ್ತು. ಹುಬ್ಬಳ್ಳಿಯ ಚೆನ್ನಮ್ಮ ವೃತ್ತಕ್ಕೆ ಹೊಂದಿಕೊಂಡಿರುವ ನೀಲಿಜನ್ ರಸ್ತೆಯಲ್ಲಿ ಘಟನೆ ನಡೆದಿತ್ತು. ನ. 15 ರಂದು ಮಂಗಳೂರಿನಿಂದ ಬೆಳಗಾವಿಗೆ ಕೆಲಸಗಾರ ವಿವೇಕ್ ಜೊತೆ ಬಂದಿದ್ದ ಸುದೀನ್ ಅವರ ಬಳಿ ಇದ್ದ ಚೈನ್, ಬ್ರಾಸ್ಲೈಟ್, ಉಂಗುರ, ಕಿವಿಯೋಲೆ, ನೆಕ್ಲೆಸ್, ಲಾಕೆಟ್, ಬಳೆ ಸೇರಿ ಒಟ್ಟು 3.2 ಕೋಟಿ ರೂ. ಮೌಲ್ಯದ ಆಭರಣಗಳನ್ನು ಖದೀಮರು ದೋಚಿದ್ದರು. ಇ.ಡಿ ಅಧಿಕಾರಿಗಳು ಎಂದು ಹಿಂದಿಯಲ್ಲಿ ಮಾತನಾಡಿದ್ದ ಆರೋಪಿಗಳು, ಗುರುತಿನ ಪತ್ರ ತೋರಿಸಿ ವಿಚಾರಣೆಗೆ ಕಚೇರಿಗೆ ಬನ್ನಿ ಎಂದು ಕಾರಿನಲ್ಲಿ ಕರೆದುಕೊಂಡು ಹೋಗಿದ್ದರು.

ಚಿನ್ನಾಭರಣಗಳನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿರುವುದು ತಿಳಿದು ಬಂದಿದೆ ಎಂದು ಸುದೀನ್‌ರನ್ನು ಬೆದರಿಸಿತ್ತು. ಅಲ್ಲದೆ, ಅವರ ಮೊಬೈಲ್ ಫೋನ್ ಪಡೆದು ಸಿಮ್ ತೆಗೆದಿದ್ದ ಆರೋಪಿಗಳು, ನಂತರ ಅವರ ಮೇಲೆ ಹಲ್ಲೆ ನಡೆಸಿ ಚಿನ್ನಾಭರಣವಿದ್ದ ಬ್ಯಾಗ್ ಕಿತ್ತುಕೊಂಡಿದ್ದರು. ಬೆಳಗಾವಿಯ ಕಿತ್ತೂರು ಸಮೀಪ ಕೆಲಸಗಾರ ವಿವೇಕ್‌ರನ್ನ ಕಾರಿಂದ ಇಳಿಸಿದ್ದ ಗ್ಯಾಂಗ್, ಸುದೀನ್‌ರನ್ನು ಎಂ.ಕೆ. ಹುಬ್ಬಳ್ಳಿ ರಸ್ತೆಯ ಮಾರ್ಗ ಮಧ್ಯೆ ಬಿಟ್ಟಿತ್ತು. ಬಳಿಕ ನಗದು ಹಾಗೂ ಚಿನ್ನಾಭರಣಗಳ ಜೊತೆ ಎಸ್ಕೇಪ್ ಆಗಿತ್ತು. ಈ ಬಗ್ಗೆ ಉಪನಗರ ಪೊಲೀಸ್ ಠಾಣೆಯಲ್ಲಿ ಮೊದಲು ಪ್ರಕರಣ ದಾಕಲಾಗಿದ್ದು, ಬಳಿಕ ಸಿಸಿಬಿಗೆ ಕೇಸ್ ವಹಿಸಲಾಗಿತ್ತು.

## ಆಸರೆಗಾಗಿ ಬಂದವಳನ್ನ ಕೊಂದು, ಆತ್ಮಹತ್ಯೆಗೆ ಶರಣಾದ ವ್ಯಕ್ತಿ




ಬೆಂಗಳೂರು: ತನ್ನ ಜೊತೆ ಲಿವಿಂಗ್ ರಿಲೇಷನ್‌ಶಿಪ್‌ನಲ್ಲಿದ್ದ ಮಹಿಳೆಯನ್ನು ಕೊಂದು ಬಳಿಕ ಹಂತಕ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಇಂದಿರಾ ಪ್ರಿಯದರ್ಶಿನಿ ನಗರದ ಮನೆಯಲ್ಲಿ ನಡೆದಿದೆ. 51 ವರ್ಷದ ಲಕ್ಷ್ಮೀನಾರಾಯಣ ಎನ್ನುವ ವ್ಯಕ್ತಿ, ಲಲಿತಾಳಣ್ಣು (49) ಕೊಂದು ಬಳಿಕ ತಾನೂ ಸಹ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಲಕ್ಷ್ಮೀನಾರಾಯಣ ಹೆಂಡತಿಯನ್ನು ಲಲಿತಾಳೊಂದಿಗೆ ಪ್ರತ್ಯೇಕ ಮನೆ ಮಾಡಿಕೊಂಡಿದ್ದ. ಆದ್ರೆ, ಬೆಳಗ್ಗೆ ಮನೆಯ ಬಾಗಿಲು ತೆರೆದೇ ಇತ್ತು. ಆದರೂ ಮನೆಯಲ್ಲಿ ಯಾರು ಕಾಣಿಸಿಲ್ಲ. ಇದರಿಂದ ಅನುಮಾನಗೊಂಡ ಪಕ್ಕದ ಮನೆಯವರು ಮನೆಯೊಳಗೆ ಬಂದು ನೋಡಿದಾಗ ಇಬ್ಬರು ಮೃತಪಟ್ಟಿರುವುದು ಬೆಳಕಿಗೆ ಬಂದಿದೆ.

ಗಂಡ ಸಾವನ್ನಪ್ಪಿದ ಬಳಿಕ ಲಲಿತಾ, ಲಕ್ಷ್ಮೀ ನಾರಾಯಣ ಜೊತೆ ಸಂಬಂಧ ಹೊಂದಿದ್ದಳು. ಇನ್ನು ಲಕ್ಷ್ಮೀ ನಾರಾಯಣ ಸಹ ಪತ್ನಿಯನ್ನು ತೊರೆದು ಲಲಿತಾಳೊಂದಿಗೆ ಪ್ರತ್ಯೇಕ ಮನೆ ಮಾಡಿಕೊಂಡಿದ್ದ. ಹೀಗೆ ಇಬ್ಬರು ಲಿವಿಂಗ್ ರಿಲೇಷನ್ ಶಿಪ್‌ನಲ್ಲಿದ್ದ. ಆದ್ರೆ, ಏಕಾಏಕಿ ಲಲಿತಾ ನಡತೆ ಬಗ್ಗೆ ಲಕ್ಷ್ಮೀ ನಾರಾಯಣ ಪ್ರಶ್ನಿಸಿ ಗಲಾಟೆ ಮಾಡಿದ್ದಾನೆ. ಇದೇ ವೇಳೆ ಇಬ್ಬರ ನಡುವಿನ ಗಲಾಟೆ ವಿಕೋಪಕ್ಕೆ ತಿರುಗಿದ್ದು, ಕೋಪದಲ್ಲಿ ಲಕ್ಷ್ಮೀ ನಾರಾಯಣ, ವೇಲ್‌ನಿಂದ ಲಲಿತಾಳ ಕುತ್ತಿಗೆ ಬಿಗಿದು ಬಳಿಕ ಲಕ್ಷ್ಮೀ ನಾರಾಯಣ ಅದೇ ವೇಲ್‌ನಿಂದ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಇಂದು ಪಕ್ಕದ ಮನೆಯವರು ಗಮನಿಸಿದಾಗ ಇಬ್ಬರೂ ಸಾವನ್ನಪ್ಪಿರುವುದು ಕಂಡು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇನ್ನು ವಿಚಾರ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಸ್ಥಳಕ್ಕೆ ರಾಜಗೋಪಾಲನಗರ ಠಾಣೆ ಪೊಲೀಸರು ಭೇಟಿ ಪರಿಶೀಲನೆ ನಡೆಸಿದರು. ಸದ್ಯ ಇಬ್ಬರ ಮೃತದೇಹಗಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದ್ದ, ಈ ಬಗ್ಗೆ ರಾಜಗೋಪಾಲನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಲಾಗಿದೆ. ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ.

## ಶಿಕ್ಷಕನಿಂದಲೇ ನಾಲ್ವರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ..!

ಅರುಣಾಚಲ: ಪ್ರದೇಶದ ರಾಜಧಾನಿ ಇಟಾನಗರದ ಹತ್ತಿರದ ನಹರ್ಲಗುನ್‌ನಲ್ಲಿ ಭಯಾನಕ ಘಟನೆ ನಡೆದಿದೆ. ಖಾಸಗಿ ತರಗತಿ ತೆಗೆದುಕೊಡುತ್ತಿದ್ದ 35 ವರ್ಷದ ಶಿಕ್ಷಕನೊಬ್ಬ ಸುಮಾರು 6 ರಿಂದ 7 ವರ್ಷ ವಯಸ್ಸಿನ ನಾಲ್ವರು ಚಿಕ್ಕ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪಕ್ಕೆ ಒಳಗಾಗಿ ಬಂಧನಕ್ಕೊಳಗಿದ್ದಾನೆ. ಭಾನುವಾರ (ನವೆಂಬರ್ 30, 2025) ರಾತ್ರಿ 9:15ರ ಸುಮಾರಿಗೆ ನಹರ್ಲಗುನ್ ಪೊಲೀಸ್ ಠಾಣೆಗೆ ಮೌಖಿಕ ದೂರು ಬಂದಿತ್ತು. 1ನೇ ತರಗತಿ ಓದುತ್ತಿರುವ ನಾಲ್ವರು ಬಾಲಕಿಯರು ಖಾಸಗಿ ತರಗತಿಗೆಂದು ಶಿಕ್ಷಕನ ಮನೆಗೆ ಹೋಗಿದ್ದರು.

ಆದರೆ ತರಗತಿ ಸಮಯದಲ್ಲೇ ಆತ ಅವರ ಮೇಲೆ ಅನುಚಿತವಾಗಿ ವರ್ತಿಸಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಆರೋಪಿಯನ್ನು ಲೋಯರ್ ಸುಬನ್‌ಸಿರಿ ಜಿಲ್ಲೆಯ ಬುಲಾ ಗ್ರಾಮದ ಮಿಲೋ ಟಿಕರ್ (35) ಎಂದು ಗುರುತಿಸಲಾಗಿದೆ. ಇಟಾನಗರ್‌ನ ನಹರ್ಲಗುನ್ ಜಿ-ಸೆಕ್ಟರ್‌ನಲ್ಲಿರುವ ಬಾಡಿಗೆ ಅಪಾರ್ಟ್‌ಮೆಂಟ್‌ನಲ್ಲಿ ಆತ ತರಗತಿ ನಡೆಸುತ್ತಿದ್ದನು. ದೂರು ಬಂದ ತಕ್ಷಣ ನಹರ್ಲಗುನ್ ಪೊಲೀಸ್ ಠಾಣೆಯ ಸಬ್-ಇನ್‌ಸ್ಪೆಕ್ಟರ್ ಎಸ್. ಡಿರ್ಚಿ ನೇತೃತ್ವದಲ್ಲಿ ಹೆಡ್ ಕಾನ್‌ಸ್ಟೇಬಲ್‌ಗಳಾದ ಎಸ್. ಬಗಾಂಗ್ ಮತ್ತು ಟಿ.ಕೆ. ಖೋಚಿ ಅವರ ತಂಡವು ಆತನನ್ನು ತಕ್ಷಣವೇ ಬಂಧಿಸಿತು. ಬಂಧನದ ನಂತರ ಮುಂದಿನ ಕಾನೂನು ಕ್ರಮಕ್ಕಾಗಿ ಆರೋಪಿಯನ್ನು ಇಟಾನಗರದ ಮಹಿಳಾ ಪೊಲೀಸ್ ಠಾಣೆಗೆ ಹಸ್ತಾಂತರಿಸಲಾಯಿತು.

ಪ್ರಕರಣವನ್ನು POCSO ಕಾಯ್ದೆಯಡಿ ದಾಖಲಿಸಲಾಗಿದ್ದು, ಬಾಲಕಿಯರ ವೈದ್ಯಕೀಯ ಪರೀಕ್ಷೆ ನಡೆಸಲಾಗಿದೆ ಮತ್ತು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಘಟನೆ ರಾಜ್ಯದಾದ್ಯಂತ ಆಕ್ರೋಶಕ್ಕೆ ಕಾರಣವಾಗಿದೆ. ನಮ್ಮ ಮಕ್ಕಳನ್ನು ಕಲಿಸುವವನೇ ಇಂತಹ ಕೃತ್ಯ ಎಸಗಿದ್ದಾನೆ ಎಂಬುದು ನಂಬಲಾಗದ ಸಂಗತಿ. ಆತನಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅರುಣಾಚಲ ಪ್ರದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ಬಾಲಕಿಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿಯಾಗಿದೆ.

ಈ ಘಟನೆಯು ಮತ್ತೊಮ್ಮೆ ಮಕ್ಕಳ ಸುರಕ್ಷತೆಯ ಬಗ್ಗೆ ಗಂಭೀರ ಚಿಂತನೆಗೆ ಒತ್ತು ನೀಡಿದೆ. ಖಾಸಗಿ ತರಗತಿಗಳು, ಟ್ಯೂಷನ್ ಸೆಂಟರ್‌ಗಳಲ್ಲಿ ಮಕ್ಕಳನ್ನು ಕಳುಹಿಸುವ ಮೊದಲು ಪೋಷಕರು ಶಿಕ್ಷಕರ ಹಿನ್ನೆಲೆ ಪರಿಶೀಲಿಸಬೇಕು, ಸಾಧ್ಯವಾದಷ್ಟು ಗುಂಪಿನಲ್ಲಿ ತರಗತಿ ಇರಿಸಿಕೊಳ್ಳಬೇಕು ಎಂಬ ಸಲಹೆಯನ್ನು ಸಾಮಾಜಿಕ ಕಾರ್ಯಕರ್ತರು ನೀಡುತ್ತಿದ್ದಾರೆ. ಈ ಪ್ರಕರಣದಲ್ಲಿ ಆರೋಪಿ ಮಿಲೋ ಟಿಕರ್‌ನನ್ನು ಬಿಡದೇ ಕಠಿಣ ಶಿಕ್ಷೆ ನೀಡಬೇಕು ಎಂದು ಗ್ರಾಮಸ್ಥರು ಹಾಗೂ ಬಾಲಕಿಯರ ಪೋಷಕರು ಮನವಿ ಮಾಡಿದ್ದಾರೆ.

## ಲೈಂಗಿಕ ಸಮಸ್ಯೆ ಪರಿಹರಿಸಲು 48 ಲಕ್ಷ ವಂಚನೆ: ವಿಜಯ್ ಗುರೂಜಿ ಅರೆಸ್ಟ್



**ಬೆಂಗಳೂರು:** ಲೈಂಗಿಕ ಸಮಸ್ಯೆಗೆ ಆಯುರ್ವೇದದ ಮೂಲಕ ಪರಿಹಾರ ನೀಡುವುದಾಗಿ ನಂಬಿಸಿ ಟೆಕ್ಕಿಯೋರ್ವರಿಗೆ ಬರೋಬ್ಬರಿ 48 ಲಕ್ಷ ರೂ. ವಂಚಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಬಂಧಿತ ಆರೋಪಿಯನ್ನು ವಿಜಯ್ ಗುರೂಜಿ ಎಂದು ಗುರುತಿಸಲಾಗಿದ್ದು, ರಸ್ತೆ ಪಕ್ಕದಲ್ಲಿ ಟೆಂಟ್‌ನಲ್ಲಿ ಕುಳಿತು ಆಯುರ್ವೇದ ಚಿಕಿತ್ಸೆ ನೀಡುವುದಾಗಿ ಜಾಹೀರಾತು ಹಾಕಿ, ನಕಲಿ ಔಷಧಿಗಳನ್ನು ಮಾರಾಟ ಮಾಡಿ ವಂಚಿಸುತ್ತಿದ್ದ ಎಂದು ತಿಳಿದುಬಂದಿದೆ ವಂಚನೆಗೊಳಗಾದ ಟೆಕ್ಕಿ ಲೈಂಗಿಕ ಸಮಸ್ಯೆಯಿಂದ ಬಳಲುತ್ತಿದ್ದರು. ಕೆಂಗೇರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಮನೆಗೆ ಮರಳುತ್ತಿದ್ದಾಗ, ರಸ್ತೆ ಬದಿಯಲ್ಲಿ ಹಾಕಲಾಗಿದ್ದ ಟೆಂಟ್ ಒಂದರಲ್ಲಿ `ಲೈಂಗಿಕ ಸಮಸ್ಯೆಗೆ ಆಯುರ್ವೇ ದಿಕ್ ಚಿಕಿತ್ಸೆ' ಎಂಬ ಜಾಹೀ ರಾತನ್ನು ಗಮನಿಸಿದ್ದಾರೆ. ಅದೇ ಭರವಸೆ ಯಿಂದ ಟೆಂಟ್‌ನಲ್ಲಿದ್ದ ವಿಜಯ್ ಗುರೂಜಿಯನ್ನು ಸಂಪರ್ಕಿಸಿದ್ದಾರೆ. ಈ ವೇಳೆ ಗುರೂಜಿ ಟೆಕ್ಕಿಗೆ `ದೇವರಾಜ್ ಬೂಟಿ' ಎಂಬ ಔಷಧಿಯನ್ನು ಖರೀದಿಸಲು ಸೂಚಿಸಿದ್ದಾನೆ. ಒಂದು ಗ್ರಾಂ ಔಷಧಿಗೆ 1.5 ಲಕ್ಷ ರೂ. ಎಂದು ಹೇಳಿದ್ದ ಗುರೂಜಿ, ಅದರಂತೆ ಟೆಕ್ಕಿಯಿಂದ 1,60,000 ರೂ. ಪಡೆದುಕೊಂಡಿದ್ದಾನೆ. ಈ ಔಷಧಿಗೆ ಹಣವನ್ನು ಆನ್‌ಲೈನ್‌ನಲ್ಲಿ ಪಾವತಿಸಬಾರದು ಮತ್ತು ಒಬ್ಬರೇ ಬಂದು ತೆಗೆದುಕೊಳ್ಳಬೇಕು ಎಂಬ ಷರತ್ತುಗಳನ್ನು ವಿಧಿಸಿದ್ದ. ಅದರಂತೆ ಟೆಕ್ಕಿ ಕೂಡ ಗುರೂಜಿಯ ಮಾತನ್ನು ನಂಬಿ ಹಣ ನೀಡಿದ್ದಾರೆ.

ಹಂತ ಹಂತವಾಗಿ ದೇವರಾಜ್ ಬೂಟಿ ಮತ್ತು `ಭವನ ಬೂಟಿ ತೈಲ' ಹೆಸರಿನಲ್ಲಿ ದುಬಾರಿ ಔಷಧಿಗಳನ್ನು ಮಾರಾಟ ಮಾಡಿದ್ದಾನೆ. ಟೆಕ್ಕಿ ತಮ್ಮ ಲೈಂಗಿಕ ಸಮಸ್ಯೆ ಪರಿಹಾರವಾಗುತ್ತದೆ ಎಂಬ ನಂಬಿಕೆಯಿಂದ ಬರೋಬ್ಬರಿ 17 ಲಕ್ಷ ರೂ. ಹಣ ಖರ್ಚು ಮಾಡಿ, ಔಷಧಿಗಳನ್ನು ಖರೀದಿಸಿದ್ದಾರೆ. ಅಷ್ಟೇ ಅಲ್ಲದೆ, ಬ್ಯಾಂಕ್‌ನಲ್ಲಿ 20 ಲಕ್ಷ ರೂ. ಸಾಲ ಪಡೆದು, ಹೀಗೆ ಒಟ್ಟು 48 ಲಕ್ಷ ರೂ. ಹಣವನ್ನು ಗುರೂಜಿಗೆ ನೀಡಿದ್ದಾರೆ. ಇಷ್ಟೆಲ್ಲಾ ದುಬಾರಿ ಔಷಧಿಗಳನ್ನು ಸೇವಿಸಿದರೂ ಟೆಕ್ಕಿಯ ಲೈಂಗಿಕ ಸಮಸ್ಯೆ ಪರಿಹಾರವಾಗಿಲ್ಲ. ಬದಲಿಗೆ, ಮತ್ತೆ ಅದೇ ಸಮಸ್ಯೆ ಶುರುವಾಗಿದೆ. ಚಿಕಿತ್ಸೆ ಗುಣಮುಖವಾಗದ ಬಗ್ಗೆ ಪ್ರಶ್ನಿಸಿದಾಗ, ಗುರೂಜಿ ಸಮಸ್ಯೆ ಹೆಚ್ಚಾಗುವಂತೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿದ್ದಾನೆ ಎನ್ನಲಾಗಿದೆ. ನಂತರ ತಮ್ಮ ಆರೋಗ್ಯದಲ್ಲಿ ವ್ಯತ್ಯಾಸ ಕಂಡುಬಂದಾಗ ರಕ್ತ ಪರೀಕ್ಷೆ ಮಾಡಿಸಿದಾಗ, ಆಯುರ್ವೇದ ಚಿಕಿತ್ಸೆಯಿಂದಾಗಿ ಕಿಡ್ನಿಗೆ ಸಮಸ್ಯೆ ಆಗಿರುವುದು ಪತ್ತೆಯಾಗಿದೆ.

ಕೊನೆಗೆ ತಾನು ವಂಚನೆಗೊಳಗಾಗಿರುವುದನ್ನು ಅರಿತ ಟೆಕ್ಕಿ, ಕೊನೆಗೆ ವಿಜಯ್ ಗುರೂಜಿ ಮತ್ತು ವಿಜಯಲಕ್ಷ್ಮಿ ಆಯುರ್ವೇದಿಕ್ ಸಂಸ್ಥೆಯ ವಿರುದ್ಧ ಜ್ಞಾನಭಾರತಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೂರಿನ ಆಧಾರದ ಮೇಲೆ ಪೊಲೀಸರು ವಿಜಯ್ ಗುರೂಜಿಯನ್ನು ಬಂಧಿಸಿ, ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ

## ಡಿವೈಡರ್‌ಗೆ ಡಿಕ್ಕಿಯಾಗಿ ಖಾಸಗಿ ಬಸ್ ಪಲ್ಟಿ ಮಹಿಳೆ ಸ್ಥಳದಲ್ಲೇ ಸಾವು




**ಕೋಲಾರ:** ಖಾಸಗಿ ಬಸ್ ಡಿವೈಡರ್‌ಗೆ ಡಿಕ್ಕಿಯಾಗಿ ಪಲ್ಟಿಯಾದ ಪರಿಣಾಮ ಓರ್ವ ಮಹಿಳೆ ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿರುವ ಘಟನೆ ಕೋಲಾರದಲ್ಲಿ ನಡೆದಿದೆ. ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಮಂಚಿ ನೀಳ್ಳಕೋಟೆ ಗ್ರಾಮದ ಬಳಿ ಮುಂಜಾನೆ ನಸುಕಿನ ಜಾವ ಸುಮಾರು 3 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ.

ಹರಿತ ಟ್ರಾವೆಲ್ಸ್‌ನ ಖಾಸಗಿ ಬಸ್ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾದ ರಭಸಕ್ಕೆ ಓರ್ವ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಆಂಧ್ರಪ್ರದೇಶದ ಪೊದುಟೂರು ಮೂಲದ ಅನಿತಾ (58) ಮೃತ ಮಹಿಳೆ. ಅಪಘಾತದಲ್ಲಿ ಹಲವು ಪ್ರಯಾಣಿಕರಿಗೆ ಗಂಭೀರ ಗಾಯಗಳಾಗಿವೆ ಖಾಸಗಿ ಬಸ್ ಆಂದ್ರಪ್ರದೇಶದ ಬದ್ವೇಲ್‌ನಿಂದ ಬೆಂಗಳೂರಿಗೆ ಬರುತ್ತಿದ್ದ ವೇಳೆ ಡಿವೈಡರ್‌ಗೆ ಡಿಕ್ಕಿಯಾಗಿದೆ.

ಅಪಘಾತದ ರಭಸಕ್ಕೆ ಬಸ್‌ನ ಚಕ್ರಗಳು ಬೇರ್ಪಟ್ಟಿದೆ. ಗಾಯಾಳುಗಳನ್ನು ಆಂಧ್ರಪ್ರದೇಶದ ಮದನಪಲ್ಲಿ ಹಾಗೂ ಶ್ರೀನಿವಾಸಪುರ, ಕೋಲಾರ ಸರ್ಕಾರಿ ಆಸ್ಪತ್ರೆಗಳಿಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನೂ ಸ್ಥಳಕ್ಕೆ ಭೇಟಿ ನೀಡಿದ ರಾಯಲ್ಪಾಡು ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಲಾರೆನ್ಸ್ ಬಿಷ್ಣೋಯ್ ಸಹಚರ ಪರ್ರಿ ಗುಂಡಿಕ್ಕಿ ಹತ್ಯೆ; ಗ್ಯಾಂಗ್‌ವಾರ್ ಶಂಕೆ



**ಚಂಡೀಗಢ**: ಗ್ಯಾಂಗ್ ಸ್ಟರ್ ಲಾ ರೆನ್ಸ್ ಬಿಷ್ಣೋಯ್ ಸಹಚ ರನನ್ನು ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ಚಂಡೀಗಢದ ಸೆಕ್ಟರ್ 26ರ ಟಿಂಬರ್ ಮಾರ್ಕೆಟ್ ಬಳಿ ನಡೆದಿದೆ. ಇಂದ್ರಪ್ರೀತ್ ಸಿಂಗ್ ಅಲಿಯಾಸ್ ಪರ್ರಿ (35) ಹತ್ಯೆಯಾದ ಸಹಚರ. ಘಟನೆ ಬಳಿಕ ಪರ್ರಿಯನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಅಷ್ಟು ಹೊತ್ತಿಗಾಗಲೇ ಆತ ಮೃತಪಟ್ಟಿರುವುದಾಗಿ ವೈದ್ಯರು ದೃಢಪಡಿಸಿದರು. ಗ್ಯಾಂಗ್ ವಾರ್‌ನಿಂದಾಗಿ ಈ ಹತ್ಯೆ ನಡೆದಿರಬಹುದು ಎಂದು ಪೊಲೀಸರು ಶಂಕಿಸಿದ್ದು, ಘಟನೆ ಸಂಬಂಧ ಪ್ರಕರಣ ದಾಖಲಿಸಿ ಕೊಂಡಿದ್ದಾರೆ ಸೋಮವಾರ ಸಂಜೆ ಎಸ್‌ಯುವಿ ಕಾರಿನಲ್ಲಿ ಖಾಸಗಿ ಕ್ಲಬ್‌ನಿಂದ ಹೊರಟಿದ್ದ. ಈ ವೇಳೆ ಆತನ ಜೊತೆ ಮತ್ತೊಬ್ಬ ವ್ಯಕ್ತಿ ಕೂಡ ಇದ್ದ. ಆತನ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ವಾಹನವು ಸ್ವಲ್ಪ ದೂರ ಚಲಿಸಿದ ಕೂಡಲೇ, ಪರ್ರಿ ಜೊತೆಗಿದ್ದ ಮತ್ತೊಬ್ಬ ವ್ಯಕ್ತಿ ಪರ್ರಿ ಮೇಲೆ ಗುಂಡು ಹಾರಿಸಿದ್ದಾನೆ. ಗುಂಡು ಹಾರಿಸಿದ ಬಳಿಕ ಆ ವ್ಯಕ್ತಿ ಕಾರಿನಿಂದ ಕೆಳಗಿಳಿದು ಮತ್ತೆ ಪರ್ರಿ ಮೇಲೆ ಗುಂಡು ಹಾರಿಸಿದ್ದಾನೆ.

ಈ ವೇಳೆ ಪರ್ರಿ ಕಾರನ್ನು ಹಿಂಬಾಲಿಸುತ್ತಿದ್ದ ಮತ್ತೊಂದು ಕಾರು ಅಲ್ಲಿ ಬಂದು ನಿಂತಿದೆ. ಪರ್ರಿ ಸಾವನ್ನು ಖಚಿತಪಡಿಸಿಕೊಂಡ ನಂತರ ವ್ಯಕ್ತಿ ಮತ್ತೊಂದು ಕಾರು ಹತ್ತಿ ಅಲ್ಲಿಂದ ಪರಾರಿಯಾ ಗಿದ್ದಾನೆ ಎಸ್‌ಯುವಿಯೊಳಗೆ ಸುಮಾರು ಐದು ಖಾಲಿ ಶೆಲ್‌ಗಳು ಪತ್ತೆಯಾಗಿದೆ. ದಾಳಿಯಲ್ಲಿ 10ಕ್ಕೂ ಹೆಚ್ಚು ಗುಂಡು ಹಾರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆ ಬಳಿಕ ಹರಿ ಬಾಕ್ಸರ್ ಅರ್ಜೂ ಬಿಷ್ಣೋಯ್ ಎಂಬ ಫೇಸ್‌ಬುಕ್ ಖಾತೆಯಲ್ಲಿ ಈ ಕೃತ್ಯ ತಾವೇ ಎಸಗಿರುವುದಾಗಿ ಪೋಸ್ಟ್ ಹಾಕಿ ಕೃತ್ಯದ ಹೊಣೆಯನ್ನು ಹೊತ್ತುಕೊಂಡಿದೆ. ಪರ್ರಿ ಸ್ಥಳೀಯ ಕ್ಲಬ್‌ಗಳಿಂದ ಹಣವನ್ನು ಸುಲಿಗೆ ಮಾಡಿದ್ದಾನೆ ಮತ್ತು ಆತನ ಸಹಚರರ ಮೇಲೆ ದಾಳಿ ಮಾಡಲು ಯತ್ನಿಸಿದ್ದ ಎಂದು ಪೋಸ್ಟ್‌ನಲ್ಲಿ ಆರೋಪಿಸಲಾಗಿದೆ. ಈ ಪೋಸ್ಟ್‌ನ ಸತ್ಯಾಸತ್ಯತೆ ಕುರಿತು ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

## ಹೆಡ್ ಕಾನ್‌ಸ್ಟೇಬಲ್ ಅನುಮಾನಾಸ್ಪದ ಸಾವು



**ರಾಮನಗರ:** ಹೆಡ್ ಕಾನ್ಸ್ ಟೇಬಲ್ ಅನು ಮಾನಾ ಸ್ಪದವಾ ಗಿ ಸಾವನ್ನಪ್ಪಿದ್ದು, ಕೆರೆಯಲ್ಲಿ ಶವವಾಗಿ ಪತ್ತೆಯಾದ ಘಟನೆ ರಾಮನಗರದಲ್ಲಿ ನಡೆದಿದೆ.ಲಕ್ಷ್ಮಣ್ (51) ಮೃತ ಹೆಡ್ ಕಾನ್‌ಸ್ಟೇಬಲ್. ಲಕ್ಷ್ಮಣ್ ಚನ್ನಪಟ್ಟಣ ಸಂಚಾರಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿ ಸುತ್ತಿದ್ದರು. ಸೋಮವಾರ ಕರ್ತವ್ಯಕ್ಕೆ ಲಕ್ಷ್ಮಣ್ ಗೈರು ಹಾಜರಾಗಿದ್ದು, ಮೊಬೈಲ್ ಸ್ವಿಚ್ ಆಫ್ ಮಾಡಿಕೊಂ ಡಿದ್ದರು ಎನ್ನಲಾಗಿದೆ. ಇಂದು ಬೆಳಗ್ಗೆ ಕೆರೆಯಲ್ಲಿ ಲಕ್ಷ್ಮಣ್ ಶವವಾಗಿ ಪತ್ತೆಯಾಗಿದ್ದಾರೆ ಹೆಲ್ಮೆಟ್ ಸಮೇತ ಲಕ್ಷ್ಮಣ್ ಬಿದ್ದಿದ್ದಾರೆ. ಕೆರೆ ಪಕ್ಕದಲ್ಲೇ ಬೈಕ್ ಕೂಡ ಪತ್ತೆಯಾಗಿದೆ. ಘಟನಾ ಸ್ಥಳಕ್ಕೆ ಚನ್ನಪಟ್ಟಣ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇದು ಆತ್ಮಹತ್ಯೆಯೋ ಅಥವಾ ಆಕಸ್ಮಿಕವಾಗಿ ಕಾಲು ಜಾರಿಬಿದ್ದಿರಬಹುದಾ ಎಂಬ ಬಗ್ಗೆ ಶಂಕೆ ವ್ಯಕ್ತವಾಗಿದೆ. ಸದ್ಯ ಮೃತದೇಹವನ್ನು ಕೆರೆಯಿಂದ ಮೇಲೆತ್ತಿ ಮರಣೋತ್ತರ ಪರೀಕ್ಷೆಗಾಗಿ ತಾಲೂಕು ಆಸ್ಪತ್ರೆಗೆ ರವಾನಿಸಲಾಗಿದೆ.

## ಲಾರಿ ಬೈಕ್ ಗೆ ಡಿಕ್ಕಿ ಸವಾರ ಸಾವು



**ನೆಲಮಂಗಲ** :ತುಮಕೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ರಸ್ತೆ ಅಪಘಾತ: ಲಾರಿ ಡಿಕ್ಕಿಯಿಂದ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ

ತುಮಕೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಭೀಕರ ಅಪಘಾತದಲ್ಲಿ ಬೈಕ್ ಸವಾರ ಜಾನ್ ಬಾಸ್ಕೊ ಎಂಬ ತಮಿಳುನಾಡಿನ ನಿವಾಸಿ ಸ್ಥಳದಲ್ಲೇ ಮೃತ ಪಟ್ಟು ದುರಂತ ಕ್ಕೆ ಕಾರಣನಾಗಿದ್ದಾರೆ. ಮತ್ತೊಬ್ಬ ಸಹಪ್ರಯಾಣಿಕರು ಗಂಭೀ ರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣವೇ ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾ ಗುತ್ತಿದೆ.

ಈ ದುರ್ಘಟನೆ ನೆಲಮಂಗಲ ತಾಲೂಕಿನ ಹನುಮಂತಪುರ ಗೇಟ್ ಸಮೀಪ ನಡೆದಿದೆ. ವೇಗವಾಗಿ ಬರುತ್ತಿದ್ದ ಲಾರಿ ಬೈಕ್‌ಗೆ ಹಿಂಬದಿಯಿಂದ ಬಲವಾಗಿ ಡಿಕ್ಕಿಹೊಡೆಯುತ್ತಿದ್ದಂತೆಯೇ ಸವಾರರು ರಸ್ತೆಗೆ ಬಿದ್ದು ಗಂಭೀ ರವಾಗಿ ಗಾಯಗೊಂಡಿದ್ದು, ಜಾನ್ ಬಾಸ್ಕೊ ಸ್ಥಳದಲ್ಲೇ ಪ್ರಾಣ ಕಳೆದುಕೊಂ ಡಿದ್ದಾರೆ. ಸ್ಥಳೀಯರು ಘಟನೆ ಕಂಡ ತಕ್ಷಣವೇ ತುರ್ತು ಸೇವೆಗಳಿಗೆ ಕರೆಮಾಡಿ ಗಾಯಾಳುಗಳನ್ನು ಆಸ್ಪತ್ರೆಗೆ ಕಳುಹಿಸುವಲ್ಲಿ ಸಹಕಾರ ನೀಡಿದರು.

ಅಪಘಾತದ ಮಾಹಿತಿ ತಿಳಿದ ತಕ್ಷಣ ನೆಲಮಂಗಲ ಸಂಚಾರಿ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಲಾರಿ ಮತ್ತು ಅದರ ಚಾಲಕನನ್ನು ಪೊಲೀಸರು ವಶಕ್ಕೆ ತೆಗೆದುಕೊಂಡು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ. ಪ್ರಕರಣದ ಕುರಿತು ತನಿಖೆ ಮುಂದು ವರಿದಿದ್ದು, ಅಪಘಾತಕ್ಕೆ ನಿಖರ ಕಾರಣ ಪತ್ತೆ ಹಚ್ಚಲು ಪೊಲೀಸರು ಕ್ರಮ ಕೈಗೊಂಡಿದ್ದಾರೆ.

## ದಿತ್ವಾ ಚಂಡಮಾರುತಕ್ಕೆ 300 ರ ಗಡಿ ದಾಟಿದ ಮೃತರ ಸಂಖ್ಯೆ



ಶ್ರೀಲಂಕಾ ದ್ವೀಪ ರಾಷ್ಟ್ರವನ್ನು 'ದಿತ್ವಾ' ಎಂಬ ಭಯಾನಕ ಸೈಕ್ಲೋನ್ ತೀವ್ರವಾಗಿ ಅಪ್ಪಳಿಸಿದೆ. ಗಂಟೆಗೆ 150 ಕಿ.ಮೀ.ಗಿಂತಲೂ ಹೆಚ್ಚು ವೇಗದಲ್ಲಿ ಬೀಸಿದ ಗಾಳಿ ಮತ್ತು ನಿರಂತರ ಧಾರಾಕಾರ ಮಳೆಯಿಂದ ದೇಶದ ಬಹುತೇಕ ಭಾಗಗಳು ಜಲಾವೃತಗೊಂಡಿವೆ. ಶ್ರೀಲಂಕಾದ ವಿಪತ್ತು ನಿರ್ವಹಣಾ ಕೇಂದ್ರ (DMC) ಬಿಡುಗಡೆ ಮಾಡಿದ ಇತ್ತೀಚಿನ ಅಂಕಿಅಂಶಗಳ ಪ್ರಕಾರ, ಈ ದುರಂತದಲ್ಲಿ ಈಗಾಗಲೇ 300ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಇದು ಕಳೆದ ಒಂದು ದಶಕದಲ್ಲಿ ಶ್ರೀಲಂಕಾ ಎದುರಿಸಿದ ಅತ್ಯಂತ ಭಯಾನಕ ಪ್ರಕೃತಿ ವಿಕೋಪಗಳಲ್ಲಿ ಒಂದಾಗಿ ಪರಿಣಮಿಸಿದೆ.


ದಿತ್ವಾ ಸೈಕ್ಲೋನ್ ಡಿಸೆಂಬರ್ ಮೊದಲ ವಾರದಲ್ಲಿ ಬಂಗಾಳ ಕೊಲ್ಲಿಯಲ್ಲಿ ರೂಪುಗೊಂಡು ಶ್ರೀಲಂಕಾದ ಪೂರ್ವ ಮತ್ತು ಉತ್ತರ -ಪೂರ್ವ ಕರಾವಳಿಯನ್ನು ಅಪ್ಪಳಿಸಿತು. ಭಾನುವಾರ ದವರೆಗೂ ನಿರಂತರವಾಗಿ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ನದಿಗಳು ಉಕ್ಕಿ ಹರಿಯುತ್ತಿದ್ದು, ತಗ್ಗು ಪ್ರದೇಶಗಳು ಸಂಪೂರ್ಣ ಜಲಪ್ರಳಯದ ರೂಪ ಪಡೆದಿವೆ.

ಮಾಹಿತಿ ಪ್ರಕಾರ, 2.73ಲಕ್ಷ ಕುಟುಂಬಗಳಿಂದ ಸುಮಾರು 10 ಲಕ್ಷ ಜನರು ಈ ದುರಂತದಿಂದ ನೇರವಾಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ. 20,000ಕ್ಕೂ ಹೆಚ್ಚು ಮನೆಗಳು ಸಂಪೂರ್ಣ ಧ್ವಂಸವಾಗಿವೆ. ಸುಮಾರು 1.22 ಲಕ್ಷ ಜನರು ಸರ್ಕಾರಿ ಮತ್ತು ಖಾಸಗಿ ಆಶ್ರಯ ಶಿಬಿರಗಳಲ್ಲಿ ತಾತ್ಕಾಲಿಕವಾಗಿ ವಾಸಿಸುತ್ತಿದ್ದಾರೆ. ಉಳಿದ 8.33 ಲಕ್ಷ ಜನರಿಗೆ ತುರ್ತು ಆಹಾರ, ಕುಡಿಯುವ ನೀರು, ಔಷಧಿ ಮತ್ತು ಬಟ್ಟೆ-ಹಾಸಿಗೆಗಳ ನೆರವು ಅಗತ್ಯವಿದೆ ಎಂದು DMC ತಿಳಿಸಿದೆ. ಭಾರಿ ಗಾಳಿ ಮತ್ತು ಮಳೆಯಿಂದ ಸಾವಿರಾರು ಮರಗಳು ಧರೆಗುರುಳಿ ರಸ್ತೆ ಸಂಚಾರ ಪೂರ್ತಿ ಸ್ತಬ್ಧವಾಗಿದೆ. ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ಬಹುತೇಕ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ದೂರವಾಣಿ ಮತ್ತು ಇಂಟರ್ನೆಟ್ ಸೇವೆಗಳೂ ಸ್ಥಬ್ದವಾಗಿದೆ. ರಕ್ಷಣಾ ಕಾರ್ಯಾಚರಣೆಗೆ ಸೈನ್ಯ, ನೌಕಾಪಡೆ ಮತ್ತು ವಾಯುಪಡೆಯ ಸಾವಿರಾರು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಹೆಲಿಕಾಪ್ಟರ್‌ಗಳ ಮೂಲಕ ಪ್ರವಾಹ ಪೀಡಿತ ಪ್ರದೇಶಗಳಿಂದ ಜನರನ್ನು ರಕ್ಷಿಸಲಾಗುತ್ತಿದೆ.

ಹವಾಮಾನ ಇಲಾಖೆಯ ಮುನ್ಸೂಚನೆಯು ಇನ್ನಷ್ಟು ಆತಂಕ ಮೂಡಿಸಿದೆ. ಮುಂದಿನ ಮೂರು ದಿನಗಳವರೆಗೂ ಭಾರಿ ಮಳೆ ಮುಂದುವರಿಯಲಿದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಗೋಲ್ಗಪ್ಪ ತಿನ್ನುವಾಗ ಎಚ್ಚರಿಕೆ: ಗೋಲ್ಗಪ್ಪ ತಿಂದಿದ್ದಕ್ಕೆ ದವಡೆ ಸ್ಥಳಾಂತರ..!



ಉತ್ತರ ಪ್ರದೇಶದ ಔರೈಯಾ ಜಿಲ್ಲೆಯಲ್ಲಿ ಗೋಲ್ಗಪ್ಪ (ಪಾನಿ ಪೂರಿ) ತಿನ್ನುವಾಗ ಅಪರೂಪದ ಆರೋಗ್ಯ ಸಮಸ್ಯೆ ಎದುರಾದ ಘಟನೆ ನಡೆದಿದೆ. ಕಾಕೋರ್ ಬಳಿಯ ಗೌರಿ ಕಿಶನ್ಪುರ ಗ್ರಾಮದ ನಿವಾಸಿ ಇಂಕಲಾ ದೇವಿ (45) ಎಂಬ ಮಹಿಳೆಯೊಬ್ಬರು ಸೊಸೆಯ ಡೆಲಿವರಿಗಾಗಿ ಆಸ್ಪತ್ರೆಯಲ್ಲಿದ್ದರು. ಆಸ್ಪತ್ರೆ ಬಳಿಯ ಅಂಗಡಿಯಲ್ಲಿ ಗೋಲ್ಗಪ್ಪ ತಿನ್ನಲು ಮುಂದಾದಾಗ ದೊಡ್ಡದಾಗಿ ಬಾಯಿ ತೆರೆದರು. ಆದರೆ ಒಮ್ಮೆಲೆ ದವಡೆಯ ಸಂಧಿ ಸ್ಥಳಾಂತರಗೊಂಡ ಕಾರಣ ಬಾಯಿ ಮುಚ್ಚಲು ಸಾಧ್ಯವೇ ಆಗಲಿಲ್ಲ.

ತೆರೆದ ಬಾಯಿಯೇ ತೆರೆದಿರುವ ಸ್ಥಿತಿ ನೋಡಿ ಸುತ್ತಮುತ್ತಲಿದ್ದವರು ಆಘಾತಕ್ಕೊಳಗಾದರು. ತಕ್ಷಣ ಸಂಬಂಧಿಕರು ಆಕೆಯನ್ನು ಜಿಲ್ಲಾ ಆಸ್ಪತ್ರೆಗೆ ಕರೆದೊಯ್ದರು. ಆದರೆ ಸ್ಥಳೀಯ ವೈದ್ಯರು ಹಲವು ಬಾರಿ ಪ್ರಯತ್ನಿಸಿದರೂ ದವಡೆಯನ್ನು ಸರಿಪಡಿಸಲು ಸಾಧ್ಯವಾಗಲಿಲ್ಲ. ನನ್ನ 20 ವರ್ಷಗಳ ವೈದ್ಯಕೀಯ ಜೀವನದಲ್ಲಿ ಇಂತಹ ಪ್ರಕರಣ ಇದೇ ಮೊದಲು ಎಂದು ಜಿಲ್ಲಾ ಆಸ್ಪತ್ರೆಯ ವೈದ್ಯರು ಮಾಧ್ಯಮಗಳಿಗೆ ತಿಳಿಸಿದ್ದಾರೆ.

ನಂತರ ಇಂಕಲಾ ದೇವಿಯನ್ನು ಸ್ಥಳಿಯ ದೊಡ್ಡ ಆಸ್ಪತ್ರೆಗೆ ರವಾನಿಸಲಾಯಿತು. ಅಲ್ಲಿ ತಜ್ಞ ತಂಡದಿಂದ ವಿಶೇಷ ಚಿಕಿತ್ಸೆ ನೀಡಿ ದವಡೆಯನ್ನು ಸರಿಪಡಿಸಲಾಯಿತು. ಆದರೆ ಈಗಲೂ ಬಾಯಿ ಸಂಪೂರ್ಣವಾಗಿ ಮುಚ್ಚಲು ಆಗುತ್ತಿಲ್ಲ, ಮಾತನಾಡಲು ಮತ್ತು ಆಹಾರ ಸೇವಿಸಲು ತೀವ್ರ ನೋವು ಉಂಟಾಗುತ್ತಿದೆ. ವೈದ್ಯರು ಇನ್ನೂ 2-3 ದಿನಗಳಲ್ಲಿ ಪೂರ್ಣ ಚೇತರಿಕೆ ಸಾಧ್ಯ ಎಂದು ಭರವಸೆ ನೀಡಿದ್ದಾರೆ.

ಈ ಘಟನೆಯಿಂದ ಸ್ಥಳೀಯರು ದಂಗಾಗಿದ್ದಾರೆ. ಗೋಲ್ಗಪ್ಪ ಅಂಗಡಿ ಮಾಲೀಕನೂ ಇಂತಹ ಘಟನೆ ಎಂದೂ ನಡೆದಿರಲಿಲ್ಲ ಎಂದು ಹೇಳಿದ್ದಾನೆ. ಸಂಬಂಧಿ ಸಾವಿತ್ರಿ ದೇವಿ ಮಾತನಾಡಿ, ಇಂಕಾಲ ದೊಡ್ಡದಾಗಿ ಬಾಯಿ ತೆರೆದರು. ಗೋಲ್ಗಪ್ಪ ಬಾಯಿಗೆ ಹಾಕಿದ ಕೂಡಲೇ ಬಾಯಿ ಮುಚ್ಚದೇ ಇದ್ದಿದ್ದನ್ನು ನೋಡಿ ನಮಗೆ ಭಯವಾಯಿತು. ತಕ್ಷಣ ಆಸ್ಪತ್ರೆಗೆ ದಾಖಲಿಸಿದೆವು ಎಂದು ಹೇಳಿದ್ದಾರೆ.

ವೈದ್ಯಕೀಯ ಭಾಷೆಯಲ್ಲಿ ಇದನ್ನು ಎನ್ನುತ್ತಾರೆ. ದವಡೆಯ ಕೀಲು ಮುಂದಕ್ಕೆ ಜಾರಿ ಸಾಮಾನ್ಯ ಸ್ಥಾನದಿಂದ ತಪ್ಪಿದಾಗ ಈ ಸ್ಥಿತಿ ಬರುತ್ತದೆ. ಗೋಲ್ಗಪ್ಪ, ಬರ್ಗರ್, ದೊಡ್ಡ ಸೇಬು ಇತ್ಯಾದಿಗಳನ್ನು ಆತುರದಲ್ಲಿ ದೊಡ್ಡದಾಗಿ ಬಾಯಿ ತೆರೆದು ತಿನ್ನುವಾಗ ಇದರ ಸಾಧ್ಯತೆ ಹೆಚ್ಚು.

# ಭಾರತಕ್ಕೆ ಬಂದ ಬಾಂಗ್ಲಾದೇಶದ 13 ಮೀನುಗಾರರು



**ಹೈದರಾಬಾದ್:** ಬಂಗಾಳ ಕೊಲ್ಲಿಯಲ್ಲಿ ಸೃಷ್ಟಿಸಿದ ಭಾರೀ ನಾಶವಾಡಿದ 'ದಿತ್ವಾ' ಚಂಡಮಾರುತದ ಅಬ್ಬರಕ್ಕೆ ದಿಕ್ಕು ತಪ್ಪಿದ ಬಾಂಗ್ಲಾದೇಶಿ ಮೀನುಗಾರರ ದೋಣಿ ಆಂಧ್ರಪ್ರದೇಶದ ಶ್ರೀಕಾಕುಳಂ ಜಿಲ್ಲೆಯ ಕರಾವಳಿಗೆ ಬಂದು ತಲುಪಿದೆ. ಸಮುದ್ರ ಮಧ್ಯೆ ಎಂಜಿನ್ ಕೆಟ್ಟು , ಆಹಾರ-ನೀರಿನ ಕೊರತೆಯಲ್ಲೂ ಸುಮಾರು 20 ದಿನಗಳ ಕಾಲ ಸಾಗರದಲ್ಲಿ ಅಲೆದಾಡಿದ್ದ 13 ಮಂದಿ ಬಾಂಗ್ಲಾ ಮೀನುಗಾರರು ಡಿಸೆಂಬರ್ 1,2025 ರಂದು ಸುರಕ್ಷಿತವಾಗಿ ರಕ್ಷಣೆಯಾಗಿದ್ದಾರೆ.

ಬಾಂಗ್ಲಾದೇಶದ ಖುಲ್ನಾ ವಿಭಾಗದ ಧೋಲಾ ಜಿಲ್ಲೆಯ ಸೊಂಡರ್‌ಬನ್ ಪ್ರದೇಶದ 13 ಮೀನುಗಾರರು ನವೆಂಬರ್ 10ರಂದು ಮೀನುಗಾರಿಕೆಗಾಗಿ ಸಮುದ್ರಕ್ಕೆ ಇಳಿದಿದ್ದರು. ಕೇವಲ 7 ದಿನಗಳ ಆಹಾರ ಮತ್ತು ಇಂಧನದೊಂದಿಗೆ ಹೊರಟಿದ್ದ ಅವರ ದೋಣಿ ನವೆಂಬರ್ ಮಧ್ಯದಲ್ಲಿ ದಿತ್ವಾ ಚಂಡಮಾರುತದ ಬಿರುಗಾಳಿ ಮತ್ತು ಭಾರೀ ಅಲೆಗಳಿಗೆ ಸಿಲುಕಿತು. ದೋಣಿಯ ಎಂಜಿನ್ ಸಂಪೂರ್ಣ ಕೆಟ್ಟು ಹೋಗಿ, ದಿಕ್ಕು ತಪ್ಪಿ ಸಾಗರದಲ್ಲಿ ಅಲೆದಾಡತೊಡಗಿತು. ಗಾಳಿ ಮತ್ತು ಸಮುದ್ರದ ಪ್ರವಾಹದಿಂದ ದೋಣಿ ಭಾರತಕ್ಕೆ ಬಂದಿದೆ. ಸುಮಾರು 20 ದಿನಗಳ ಕಾಲ ಸಮುದ್ರದಲ್ಲಿ ತೇಲಾಡಿದ್ದ ಈ ಮೀನುಗಾರರು ಕೇವಲ ಬಿಸ್ಕತ್ತು ನೀರು ಮತ್ತು ಮಳೆನೀರನ್ನೇ ಸೇವಿಸಿ ಬದುಕುಳಿದಿದ್ದಾರೆ. ಏಳೇ ದಿನಕ್ಕೆ ಆಹಾರ ಮುಗಿಯಿತು. ನಂತರ ಮಳೆ ಬಂದಾಗ ನೀರು ಕುಡಿದು, ಮೀನುಗಳನ್ನು ಕೈಯಲ್ಲಿ ಹಿಡಿದು ತಿನ್ನುತ್ತಿದ್ದೆವು ಎಂದು ಮೀನುಗಾರರು ಹೇಳಿದ್ದಾರೆ.

ನವೆಂಬರ್ 30ರ ಸಂಜೆ ಶ್ರೀಕಾಕುಳಂ ಜಿಲ್ಲೆಯ ಕಾವಿಟಿ ಕರಾವಳಿಯ ಬಳಿ ಈ ವಿದೇಶಿ ದೋಣಿ ಕಾಣಿಸಿಕೊಂಡಿತು. ಸ್ಥಳೀಯ ಮೀನುಗಾರರು ದೂರದಿಂದಲೇ ಬಾಂಗ್ಲಾ ಭಾಷೆಯಲ್ಲಿ ಮಾತನಾಡುತ್ತಿರುವುದನ್ನು ಕೇಳಿ ಸಂದೇಹ ವ್ಯಕ್ತಪಡಿಸಿದರು. ತಕ್ಷಣ ಅವರು ಕಾವಿಟಿ ಮೀನುಗಾರಿಕೆ ಬಂದರಿನ ಅಧಿಕಾರಿಗಳಿಗೆ ಮತ್ತು ಪೊಲೀಸರಿಗೆ ಮಾಹಿತಿ ನೀಡಿದರು.

ಕಾವಿಟಿ ಮೆರೈನ್ ಪೊಲೀಸರು ಮತ್ತು ಕೋಸ್ಟಲ್ ಸೆಕ್ಯುರಿಟಿ ಪೊಲೀಸರು ತಕ್ಷಣ ಸ್ಥಳಕ್ಕೆ ತೆರಳಿ 13 ಮೀನುಗಾರರನ್ನು ಸುರಕ್ಷಿತವಾಗಿ ಕರೆತಂದರು. ಅವರಿಗೆ ಆಹಾರ, ನೀರು, ವೈದ್ಯಕೀಯ ತಪಾಸಣೆ ನೀಡಲಾಯಿತು. ದೋಣಿಯನ್ನು ವಶಕ್ಕೆ ಪಡೆಯಲಾಗಿದೆ. ಆರಂಭಿಕ ತಪಾಸಣೆಯಲ್ಲಿ ಯಾವುದೇ ಅಕ್ರಮ ಚಟುವಟಿಕೆಯ ಆರೋಪ ಕಂಡುಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಮೀನುಗಾರರು ತಪ್ಪಿತಸ್ಥರಲ್ಲ. ಅವರನ್ನು ಮಾನವೀಯತೆಯ ದೃಷ್ಟಿಯಿಂದ ನೋಡಿಕೊಳ್ಳಲಾಗುತ್ತಿದೆ. ಬಾಂಗ್ಲಾದೇಶಿ ಅಧಿಕಾರಿಗಳಿಗೆ ಮಾಹಿತಿ ರವಾನಿಸಲಾಗಿದೆ. ಶೀಘ್ರದಲ್ಲೇ ಅವರನ್ನು ಸ್ವದೇಶಕ್ಕೆ ಕಳುಹಿಸುವ ವ್ಯವಸ್ಥೆ ಮಾಡಲಾಗುವುದು ಎಂದು ಸ್ಥಳಿಯ ಅಧಿಕಾರಿ ತಿಳಿಸಿದ್ದಾರೆ. ಬಾಂಗ್ಲಾದೇಶದ ಧೋಲಾ ಪೊಲೀಸ್ ಠಾಣೆಯಿಂದಲೂ ಈ 13 ಮಂದಿ ಮೀನುಗಾರರು ನವೆಂಬರ್ 10ರಂದು ಸಮುದ್ರಕ್ಕೆ ತೆರಳಿದ್ದಾರೆ ಎಂಬ ಮಾಹಿತಿ ಬಂದಿದ್ದು, ಅವರ ಕುಟುಂಬಗಳಿಗೆ ಸುರಕ್ಷಿತ ಸಂದೇಶ ತಲುಪಿಸಲಾಗಿದೆ.

# ರಾಮೇಶ್ವರಂ ಕೆಫೆ ಊಟದಲ್ಲಿ ಹುಳ ಪತ್ತೆ ಪ್ರಕರಣ: FIR ದಾಖಲು



**ಬೆಂಗಳೂರು:** ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿರುವ ಪ್ರಸಿದ್ಧ ರಾಮೇಶ್ವರಂ ಕೆಫೆಯಲ್ಲಿ ಊಟದಲ್ಲಿ ಹುಳ ಕಂಡುಬಂದ ಪ್ರಕರಣ ಈಗ ಮತ್ತೆ ಮುನ್ನೆಲೆಗೆ ಬಂದಿದೆ. ಆ ಹುಳದ ಜೊತೆಗೆ ಕೆಫೆ ಮಾಲೀಕರು ಸುಳ್ಳು ದೂರು ನೀಡಿ ಗ್ರಾಹಕನಿಗೆ ಮಾನಹಾನಿ ಮಾಡಿದ ಆರೋಪದಡಿ ಮಾಲೀಕರಾದ ದಿವ್ಯಾ ರಾಘವೇಂದ್ರ ರಾವ್, ರಾಘವೇಂದ್ರ ರಾವ್ ಮತ್ತು ಮ್ಯಾನೇಜರ್ ಸುಮಂತ್ ಎಂಬುವವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಬೆಂಗಳೂರು ವಿಮಾನ ನಿಲ್ದಾಣದ ಡಿಪಾರ್ಚರ್ ಪ್ರದೇಶದಲ್ಲಿರುವ ರಾಮೇಶ್ವರಂ ಕೆಫೆಯ ಊಟದಲ್ಲಿ ಹುಳ ಕಂಡುಬಂದಿತ್ತು. ಆಘಾತಗೊಂಡ ಯುವಕರು ತಕ್ಷಣ ವಿಡಿಯೋ ಚಿತ್ರೀಕರಿಸಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡರು. ವಿಡಿಯೋ ಕೆಲವೇ ಗಂಟೆಗಳಲ್ಲಿ ವೈರಲ್ ಆಗಿತ್ತು.

ಆದರೆ ಇದೇ ಸಮಯಕ್ಕೆ ಕೆಫೆಗೆ ಅನಾಮಧೇಯ ಕರೆ ಬಂದಿದ್ದು, ಹಣಕ್ಕೆ ಬೇಡಿಕೆ ಇಡಲಾಗಿತ್ತು. ಈ ಕರೆಯನ್ನು ವಿಡಿಯೋ ಮಾಡಿದ ಯುವಕರೇ ಮಾಡಿದ್ದಾರೆಂದು ಭಾವಿಸಿದ ಕೆಫೆ ಮಾಲೀಕರು ತಕ್ಷಣ ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರು. ಅವರು ಯುವಕರ ಮೇಲೆ ಬ್ಲ್ಯಾಕ್‌ಮೇಲ್ ಮತ್ತು ಹಣಕ್ಕೆ ಬೇಡಿಕೆ ಇಟ್ಟ ಆರೋಪ ಹೊರಿಸಿದ್ದರು.

ಯುವಕರು ಆ ದೂರನ್ನು ವಿರೋಧಿಸಿದ್ದು, "ನಾವು ವಿಡಿಯೋ ಮಾಡಿದ್ದು ನಿಜವಾದ ಘಟನೆಯನ್ನು ಜನರಿಗೆ ತಿಳಿಸಲು ಮಾತ್ರ. ಯಾವುದೇ ಹಣಕ್ಕೆ ಬೇಡಿಕೆ ಇಟ್ಟಿಲ್ಲ" ಎಂದು ಅವರು ಹೇಳಿದರು. ಪ್ರಕರಣವನ್ನು ಮೊದಲು ವಿಮಾನ ನಿಲ್ದಾಣ ಠಾಣೆಯಿಂದ ವೈಯಾಲಿಕಾವಲ್ ಠಾಣೆಗೆ ವರ್ಗಾಯಿಸಲಾಯಿತು.

ವೈಯಾಲಿಕಾವಲ್ ಪೊಲೀಸರು ತನಿಖೆ ನಡೆಸಿದಾಗ, ಹಣಕ್ಕೆ ಬೇಡಿಕೆ ಇಟ್ಟ ಕರೆಯ ಸಂಖ್ಯೆಯು ವಿಡಿಯೋ ಮಾಡಿದ ಯುವಕರದ್ದಲ್ಲ ಎಂಬುದು ಖಚಿತವಾಯಿತು. ಬೇರೊಬ್ಬರೇ ಬ್ಲ್ಯಾಕ್‌ಮೇಲ್‌ಗೆ ಯತ್ನಿಸಿದ್ದರು ಎಂಬುದು ತಿಳಿದು ಬಂದಿದೆ. ಈ ಸತ್ಯ ಬಯಲಾದ ಬಳಿಕ ವಿಡಿಯೋ ಮಾಡಿದ ಯುವಕ ತಾನು ಮಾಡದ ತಪ್ಪಿಗೆ ಆರೋಪಿಯಾಗಿದ್ದೇನೆ, ನನ್ನ ಮೇಲೆ ಸುಳ್ಳು ಆರೋಪ ಹೊರಿಸಿ ಮಾನಹಾನಿ ಮಾಡಲಾಗಿದೆ ಎಂದು ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ ಪ್ರತಿದೂರು ದಾಖಲಿಸಿದರು. ಈ ದೂರಿನ ಆಧಾರದ ಮೇಲೆ ರಾಮೇಶ್ವರಂ ಕೆಫೆಯ ಮಾಲೀಕರಾದ ದಿವ್ಯಾ ರಾಘವೇಂದ್ರ ರಾವ್, ರಾಘವೇಂದ್ರ ರಾವ್ ಹಾಗೂ ಮ್ಯಾನೇಜರ್ ಸುಮಂತ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಈಗ ಪೊಲೀಸರು ಎರಡೂ ದಿಕ್ಕುಗಳಲ್ಲೂ ತನಿಖೆ ನಡೆಸುತ್ತಿದ್ದಾರೆ. ಒಂದೆಡೆ ಹುಳ ಹೇಗೆ ಊಟದಲ್ಲಿ ಬಂತು ಎಂಬುದು ಎಂಬುದನ್ನು ಪರಿಶೀಲಿಸುತ್ತಿದ್ದಾರೆ. ಮತ್ತೊಂದೆಡೆ ಮಾಲೀಕರ ಸುಳ್ಳು ದೂರು ಸತ್ಯಾಸತ್ಯತೆಯನ್ನೂ ತನಿಖೆ ಮಾಡುತ್ತಿದ್ದಾರೆ.

# ಹೈಕಮಾಂಡ್ ಹೇಳಿದ್ದಕ್ಕೆ ಇಬ್ಬರು ಬದ್ಧರಾಗಿದ್ದೇವೆ: ಸಿದ್ದರಾಮಯ್ಯ-ಶಿವಕುಮಾರ್ ಒಗ್ಗಟ್ಟಿನ ಸಂದೇಶ

**ಬೆಂಗಳೂರು:** ಕರ್ನಾಟಕ ಕಾಂಗ್ರೆಸ್‌ನಲ್ಲಿ ಕಳೆದ ಕೆಲವು ದಿನಗಳಿಂದ ಕೇಳಿಬಂದಿದ್ದ ಕುರ್ಚಿ ವಿವಾದದ ಊಹಾಪೋಹಗಳಿಗೆ ಮಂಗಳವಾರ ಬೆಳಗ್ಗೆ ಪೂರ್ಣವಿರಾಮ ಬಿದ್ದಂತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಡಿಕೆಶಿ ಅವರ ಸದಾಶಿವನಗರದ ನಿವಾಸದಲ್ಲಿ ಉಪಹಾರ ಕೂಟ ನಡೆಸಿಕೊಂಡು, ಒಗ್ಗಟ್ಟಿನ ಸಂದೇಶ ರವಾನಿಸಿದ್ದಾರೆ.

ಉಪಹಾರದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, "ನಾವು ಒಂದೇ ಪಕ್ಷದಲ್ಲಿದ್ದೇವೆ, ಒಂದೇ ಸಿದ್ಧಾಂತವನ್ನು ನಂಬಿದ್ದೇವೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಹೈಕಮಾಂಡ್ ಹೇಳಿದ್ದಕ್ಕೆ ಇಬ್ಬರೂ ಸಂಪೂರ್ಣ ಬದ್ಧರಾಗಿದ್ದೇವೆ. ನಾವು ಒಡಹುಟ್ಟಿದವರಂತೆ ನಡೆಯುತ್ತಿದ್ದೇವೆ, ಮುಂದೆಯೂ ಅದೇ ರೀತಿ ನಡೆಯುತ್ತೇವೆ" ಎಂದು ಸ್ಪಷ್ಟಪಡಿಸಿದರು. ನಾಳೆ (ಬುಧವಾರ) ಬೆಂಗಳೂರಿನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಇಬ್ಬರೂ ಮತ್ತೊಮ್ಮೆ ಒಟ್ಟಾಗಿ ಕಾಣಿಸಿಕೊಳ್ಳಲಿದ್ದಾರೆ.



ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಕೂಡ ಆಗಮಿಸುತ್ತಿದ್ದಾರೆ. "ಅಲ್ಲಿ ಮತ್ತೊಮ್ಮೆ ಚರ್ಚೆ ನಡೆಸುತ್ತೇವೆ. ರಾಜ್ಯ ಕಾಂಗ್ರೆಸ್‌ನ ಎಲ್ಲ ವಿಚಾರಗಳನ್ನೂ ಒಮ್ಮೆಲೇ ಪರಿಶೀಲಿಸುತ್ತೇವೆ" ಎಂದು ಸಿದ್ದರಾಮಯ್ಯ ತಿಳಿಸಿದರು. ಶನಿವಾರ ಸಿದ್ದರಾಮಯ್ಯ ಅವರ ನಿವಾಸದಲ್ಲಿ ನಡೆದ ಉಪಹಾರ ಬಗ್ಗೆ ಸಿಎಂ ಹಾಸ್ಯದಿಂದ ಉತ್ತರಿಸಿದ್ದು, "ಅವರು (ಡಿಕೆಶಿ) ಸಂಪೂರ್ಣ ಸಸ್ಯಾಹಾರಿ.

ಹಾಗಾಗಿ ನಾನು ಮನೆಯಲ್ಲಿ ವೆಜ್ ತಿಂಡಿಗಳನ್ನೇ ಮಾಡಿಸಿದ್ದೆ. ನಾನು ಮಾತ್ರ ಮಾಂಸಾಹಾರಿ, ಆದ್ದರಿಂದ ಇಂದು ಅವರು ನಾಟಿಕೋಳಿ ಬಿರ್ಯಾನಿ, ಮಟನ್ ಚಾಪ್ ಮಾಡಿಸಿದ್ದರು ಎಂದು ನಗುತ್ತಾ ಹೇಳಿದರು. ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿ, "ಮೊದಲು ನಾನೇ ಸಿಎಂ ಅವರನ್ನು ಕರೆದಿದ್ದೆ. ಆದರೆ ಮೊದಲ ಉಪಹಾರ ಸಭೆ ಅವರ ಮನೆಯಲ್ಲೇ ನಡೆಯಿತು. ಇಂದು ನನ್ನ ಮನೆಯಲ್ಲಿ ನಡೆಯಿತು. ನಾಳೆ ಸುರ್ಜೇವಾಲಾ ಅವರನ್ನೂ ಭೇಟಿಯಾಗಲು ಅವಕಾಶ ಕೇಳಿದ್ದೇವೆ. ಮುಂಬರುವ ಅಧಿವೇಶನ, ಸರ್ಕಾರದ ಕಾರ್ಯಕ್ರಮಗಳು, ಪಕ್ಷ ಸಂಘಟನೆ ಎಲ್ಲವನ್ನೂ ಚರ್ಚಿಸಿದ್ದೇವೆ. ಶಾಸಕರಿಗೆ ಈ ಒಗ್ಗಟ್ಟಿನ ಸಂದೇಶ ತಲುಪಿಸುತ್ತೇವೆ" ಎಂದರು.

"ನಮ್ಮದು ಒಂದೇ ಗುರಿ, ಒಂದೇ ಆಚಾರ-ವಿಚಾರ. ಯಾರು ಏನೇ ಹೇಳಿದರೂ ನಾವು ಒಟ್ಟಾಗಿ ಎದುರಿಸುತ್ತೇವೆ. ಕಾಂಗ್ರೆಸ್ ಪಕ್ಷ ಒಡೆಯುವುದಿಲ್ಲ, ಒಡೆಯಲು ಬಿಡುವುದೂ ಇಲ್ಲ" ಎಂದು ಡಿಕೆಶಿ ಹೇಳಿದರು.

ಈ ಸಂದರ್ಭದಲ್ಲಿ ಇತ್ತೀಚೆಗೆ ನಿಧನರಾದ ಮಾಜಿ ಶಾಸಕ ಆರ್.ವಿ. ದೇವರಾಜ್ ಅವರಿಗೆ ಇಬ್ಬರೂ ಗೌರವ ಸಲ್ಲಿಸಿದರು. "ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಕಳೆದುಕೊಂಡಿದ್ದೇವೆ. ಯಾವ ಕಾಂಗ್ರೆಸ್ ಕಾರ್ಯಕ್ರಮ ಇದ್ದರೂ ಮಾರ್ಕೆಟ್‌ನಿಂದ ತಾವೇ ಹೂವು ತಂದುಕೊಡುತ್ತಿದ್ದರು. ಅವರ ಅಗಲಿಕೆ ಪಕ್ಷಕ್ಕೆ ದೊಡ್ಡ ನಷ್ಟ" ಎಂದು ಸಿದ್ದರಾಮಯ್ಯ ಭಾವುಕರಾದರು.

# ಬೀಡಿ, ಸಿಗರೇಟ್ ಬಂದ್ ಮಾಡಿದ್ದಕ್ಕೆ ಪರಪ್ಪನ ಅಗ್ರಹಾರ ಕೈದಿಗಳಿಂದ ಪ್ರತಿಭಟನೆ

**ಬೆಂಗಳೂರು:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಇದುವರೆಗೂ ಕಂಡುಕೇಳರಿಯದ ಪ್ರತಿಭಟನೆ ನಡೆಯುತ್ತಿದೆ. ಕೈದಿಗಳು ಊಟ-ತಿಂಡಿ ಬಿಟ್ಟು ಮೂರು ದಿನಗಳಿಂದ ಧರಣಿ ಕುಳಿತಿದ್ದಾರೆ. ಜೈಲಿನೊಳಗೆ ಅಕ್ರಮವಾಗಿ ನಡೆಯುತ್ತಿದ್ದ ಬೀಡಿ-ಸಿಗರೇಟ್ ಮಾರಾಟವನ್ನು ಸಂಪೂರ್ಣವಾಗಿ ನಿಲ್ಲಿಸಿರುವುದಕ್ಕೆ ಕೈದಿಗಳು ಪ್ರತಿಭಟನೆಗಿಳಿದಿದ್ದಾರೆ.

ಕಳೆದ ಕೆಲವು ತಿಂಗಳುಗಳ ಹಿಂದೆಯಷ್ಟೇ ಜೈಲಿನೊಳಗೆ ನಡೆಯುತ್ತಿದ್ದ ಅಕ್ರಮ ಚಟುವಟಿಕೆಗಳ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ, ರಾಜ್ಯದಾದ್ಯಂತ ಆಕ್ರೋಶಕ್ಕೆ ಕಾರಣವಾಗಿದ್ದವು. ಐಷಾರಾಮಿ ಜೀವನ, ಮೊಬೈಲ್ ಫೋನ್, ಡ್ರಗ್ಸ್, ಜೂಜು ಇವೆಲ್ಲವೂ ಜೈಲಿನೊಳಗೆ ಸಾಮಾನ್ಯವಾಗಿ ನಡೆಯುತ್ತಿದ್ದವು ಎಂಬ ಸತ್ಯ ಬಯಲಾಗಿತ್ತು. ಈ ಹಿನ್ನೆಲೆಯಲ್ಲಿ ಹೊಸ ಮುಖ್ಯ ಅಧೀಕ್ಷಕರಾಗಿ ಅಂಶು ಕುಮಾರ್ ಅವರನ್ನು ನೇಮಿಸಲಾಯಿತು. ಆದೇಶ ಸ್ವೀಕರಿಸಿದ ದಿನದಿಂದಲೇ ಅವರು ಕಠಿಣ ಕ್ರಮಗಳಿಗೆ ಕೈ ಹಾಕಿದ್ದಾರೆ.

ಅಂಶು ಕುಮಾರ್ ಅವರ ಆಗಮನದೊಂದಿಗೆ ಜೈಲಿನ ಒಳಗೆ ವಿಶೇಷ ಶೋಧನಾ ತಂಡ ರಚನೆಯಾಯಿತು. ಈ ತಂಡ ಇದುವರೆಗೆ 50ಕ್ಕೂ ಹೆಚ್ಚು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡಿದೆ. ಅಲ್ಲದೆ, ಅಕ್ರಮ ಹಣ ವರ್ಗಾವಣೆ, ಡ್ರಗ್ಸ್ ಸಾಗಾಟ, ಜೂಜಿನ ಜಾಲಗಳಿಗೂ ಕಡಿವಾಣ ಹಾಕಲಾಗಿದೆ. ಜೈಲಿನೊಳಗೆ ಯಾವುದೇ ರೀತಿಯ ತಂಬಾಕು ಉತ್ಪನ್ನಗಳ ಮಾರಾಟ ಅಥವಾ ಬಳಕೆ ಕಾನೂನುಬಾಹಿರ. ಸಿಬ್ಬಂದಿಗಳಿಂದ ಕೈದಿಗಳಿಗೆ ಬೀಡಿ-ಸಿಗರೇಟ್ ತಲುಪಿಸುವುದು, ಅದಕ್ಕೆ ಬದಲಾಗಿ ದುಬಾರಿ ದರದಲ್ಲಿ ಹಣ ಪಡೆಯುವುದು ಸಾಮಾನ್ಯವಾಗಿತ್ತು. ಒಳಗಿನ ಕೈದಿಗಳ ಪೈಕಿ ಕೆಲವರು ಈ ವ್ಯಾಪಾರದಿಂದಲೇ ಲಕ್ಷಾಂತರ ರೂಪಾಯಿ ಗಳಿಸುತ್ತಿದ್ದರು ಎಂಬ ಮಾತೂ ಕೇಳಿಬರುತ್ತಿದೆ.

ಈಗ ಈ ಮಾರಾಟ ಸಂಪೂರ್ಣ ಬಂದ್ ಆದಾಗ, ಕೈದಿಗಳು ಆಕ್ರೋಶಗೊಂಡಿದ್ದಾರೆ. ಜೈಲಿನ ಆಡಳಿತ ಕಚೇರಿ ಮುಂದೆ ನೂರಾರು ಕೈದಿಗಳು ಧರಣಿ ಕುಳಿತು "ಬೀಡಿ ಕೊಡಿ, ಇಲ್ಲಾ ಊಟ ಬೇಡ" ಎಂದು ಘೋಷಣೆ ಕೂಗುತ್ತಿದ್ದಾರೆ. ಇದುವರೆಗೆ ಯಾವುದೇ ಹಿಂಸಾತ್ಮಕ ಘಟನೆ ನಡೆದಿಲ್ಲ, ಆದರೆ ಪ್ರತಿಭಟನೆ ನಡೆಸಿದ್ದಾರೆ.

ಹಿರಿಯ ಜೈಲು ಅಧಿಕಾರಿಗಳು ಕೈದಿಗಳೊಂದಿಗೆ ಮಾತುಕತೆ ನಡೆಸುತ್ತಿದ್ದಾರೆ. "ಇದು ಕಾನೂನಿನ ಆದೇಶ. ಯಾವುದೇ ಸಂದರ್ಭದಲ್ಲಿ ಬೀಡಿ-ಸಿಗರೇಟ್‌ಗೆ ಅವಕಾಶ ಇಲ್ಲ. ಆರೋಗ್ಯದ ದೃಷ್ಟಿಯಿಂದಲೂ ಇದು ಸರಿ" ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಆದರೆ ಕೆಲವರು "ಜೈಲಿನಲ್ಲಿರುವುದೇ ಶಿಕ್ಷೆ, ಇನ್ನು ಬೀಡಿ ಕಸಿಯುವುದು ಎಲ್ಲಿಂದಲಾದರೂ ಮಾನವೀಯತೆ ಇರಲಿ" ಎಂದು ವಾದಿಸುತ್ತಿದ್ದಾರೆ.

ಸುದ್ದಿ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812
9880655634

# ಕೆ.ಬಿ.ಮಹೇಶ್ ಅಮಾನತು ಆದೇಶವನ್ನು ತಕ್ಷಣ ವಾಪಸ್ ಪಡೆಯಲು ಒತ್ತಾಯ,




ಪುರಸಭಾ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಹಿರಿಯ ಸದಸ್ಯರಾದ ಕೆ ಬಿ ಮಹೇಶ್ ಅಮಾನತು ಅದೇಶವನ್ನು ತಕ್ಷಣ ವಾಪಸ್ ಪಡೆಯದೇ ಇದ್ದಲ್ಲಿ ಬೂಕನಕೆರೆ ಹೋಬಳಿಯ ಎಲ್ಲಾ ಕಾಂಗ್ರೆಸ್ ಮುಖಂಡರು ತಮ್ಮ ತಮ್ಮ ಹುದ್ದೆಗಳಿಗೆ ರಾಜೀನಾಮೆ ನೀಡಿ ಜಿಲ್ಲಾ ಕಾಂಗ್ರೆಸ್ ಕಚೇರಿಯ ಮುಂದೆ ಪ್ರತಿಭಟನೆ ನಡೆಸಬೇಕಾಗುತ್ತದೆ. ಇದಕ್ಕೆ ಆಸ್ಪದ ನೀಡದೇ ಕೆ.ಬಿ.ಮಹೇಶ್ ಅವರ ಅಮಾಮತ್ತು ಆದೇಶ ಹಿಂಪಡೆಯಬೇಕು ಎಂದು ಬೂಕನಕೆರೆ ಹೋಬಳಿಯ ಕಾಂಗ್ರೆಸ್ ಮುಖಂಡರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರನ್ನು ಒತ್ತಾಯ ಮಾಡಿದರು. ತಾಲ್ಲೂಕು ಬೂಕನಕೆರೆ ಹೋಬಳಿ ಕಾಂಗ್ರೆಸ್ ಮುಖಂಡರಿಂದ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸಿ ಕಿಡಿಕಾರಿದರು

ತಾಲ್ಲೂಕು ಕಾಂಗ್ರೆಸ್ ಹಿರಿಯ ಮುಖಂಡರು ಹಾಗೂ ಕಾಂಗ್ರೆಸ್ ಪಕ್ಷದ ನಿಷ್ಟಾವಂತರಾದ ಕೆ ಬಿ ಮಹೇಶ್ ಅಮಾನತು ಆದೇಶವನ್ನು ಹಿಂಪಡೆಯದಿದ್ದರೆ ನಮ್ಮ ನಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕಾಗುತ್ತದೆ ಎಂದು ಕಾಂಗ್ರೆಸ್ ವರಿಷ್ಠರಿಗೆ ಎಚ್ಚರಿಕೆ ನೀಡಿದರು.

ಇನ್ನೂ ಕೆಲವು ದಿನಗಳಲ್ಲಿ ಗ್ರಾಮ ಪಂಚಾಯತಿ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿ ಪುರಸಭೆ ಚುನಾವಣೆಗಳು ಸಾಲು ಸಾಲಿನ ರೀತಿಯಲ್ಲಿ ಬರುತ್ತಿರುವ ಸಂದರ್ಭದಲ್ಲಿ ಕಳೆದ 35ವರ್ಷಗಳಲ್ಲಿ ಪಕ್ಷಕ್ಕೆ ಪ್ರಾಮಾಣಿಕವಾಗಿ ದುಡಿದಿರುವ ಕೆ ಬಿ ಮಹೇಶ್ ಅಮಾನತು ಶಿಕ್ಷೆಯನ್ನು ರದ್ದು ಪಡಿಸಿ ಗೌರವ ಯುತವಾಗಿ ನಡೆಸಿಕೊಳ್ಳಲು ಇದೇ ಸಮಯದಲ್ಲಿ ಮನವಿ ಮಾಡಿದರು. ಗೋಷ್ಠಿಯಲ್ಲಿ ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ ಕಬ್ಬಲಗೆರೆಪುರ ಪುಟ್ಟಸ್ವಾಮಿಗೌಡ, ಜಿಲ್ಲಾ ಪಂಚಾಯತಿ ಸದಸ್ಯ ಬೂಕನಕೆರೆ ಬಿ.ಟಿ. ವೆಂಕಟೇಶ್, ಬೂಕನಕೆರೆ ಅಡಿಕೆ ಮಹೇಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಕುಮಾರ್,ಪುರಸಭಾ ಉಪಾಧ್ಯಕ್ಷ ಉಮೇಶ್,ಸದಸ್ಯ ರವೀಂದ್ರ ಬಾಬು,ಸಲ್ಲು, ಬಲ್ಲೇನಹಳ್ಳಿ ರಮೇಶ್, ಕಾಂಗ್ರೆಸ್ ಯುವ ಮುಖಂಡರಾದ ಬಲ್ಲೇನಹಳ್ಳಿ ಬಿ.ಎಸ್.ರಾಮು, ಚಟ್ಟಂಗೆರೆ ನಾಗೇಶ್, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಧನಂಜಯ, ರಾಮೇಗೌಡ, ಅಶೋಕ್,ವಕೀಲ ನಾಗೇಶ್,ವಿಠಲಾಪುರ ಗ್ರಾ.ಪಂ.ಮಾಜಿ ಅಧ್ಯಕ್ಷ ಹರೀಶ್,ಪುರಸಭಾ ಮಾಜಿ ಕೌನ್ಸಿಲರ್ ಮಹೇಶ್, ಸುನಿಲ್, ಅನಿಲ್ ಸೇರಿದಂತೆ ಇತರರು ಹಾಜರಿದ್ದರು.

# ಕಂಪನಿ ನೀಡುವ ಹಿಂಸೆಗೆ ಬೇಸತ್ತ ಯುವಕ



ಬೆಂಗಳೂರು: ಇಂದಿನ ಯುವ ಜನರಿಗೆ ಉದ್ಯೋಗದಲ್ಲಿ ನೆಮ್ಮದಿ ಇಲ್ಲ. ಏಕೆಂದರೆ ಕಂಪನಿಗಳಲ್ಲಿ ಹೆಚ್ಚುತ್ತಿರುವ ಕೆಲಸದ ಒತ್ತಡ. ಈ ಕಾರ್ಪೋರೇಟ್ ಕಂಪನಿಗಳಲ್ಲಿ (Corporate Stress) ಸ್ಯಾಲರಿಗೆ ತಕ್ಕಂತೆ ಕೆಲಸ ಇಲ್ಲ. ಕೆಲಸ ಹೆಚ್ಚು, ಸಂಬಳ ಕಡಿಮೆ ಎಂಬ ಆರೋಪಗಳು ಇದೆ. ಕೆಲಸ ಒತ್ತಡದಿಂದ ಯುವಕರ ಜೀವನ ಹಾಳಾಗುತ್ತಿದೆ ಎಂದು ಸೋಶಿಯಲ್ ಮೀಡಿಯಾದಲ್ಲಿ ಅದೆಷ್ಟೋ ಮೀಮ್ಸ್‌ಗಳು ವೈರಲ್ ಆಗುತ್ತಿದೆ. ಇದರ ನಡುವೆ ಈ ವಿಡಿಯೋವೊಂದು ಭಾರೀ ವೈರಲ್ ಆಗಿದೆ.

ಬೆಂಗಳೂರಿನ ಉದ್ಯೋಗಿಯೊಬ್ಬರು ಸಾಮಾಜಿಕ ಜಾಲತಾಣದಲ್ಲಿ ನೆಟ್ಟಿಗರ ಮನಸ್ಸು ಗೆದ್ದಿದ್ದಾರೆ. 22 ವರ್ಷದ ಅನ್ಮುಲ್ ಉತ್ತಯ್ಯ ಸೋಮವಾರದಂದು ಈ ವಿಡಿಯೋವನ್ನು ಹಂಚಿಕೊಂಡು ಸೋಶಿಯಲ್ ಮೀಡಿಯಾದಲ್ಲಿ ಧೂಳೆಬ್ಬಿಸಿದ್ದಾರೆ. ತಾನು ಮಾಡುತ್ತಿರುವ ಕೆಲಸಕ್ಕೆ ರಾಜೀನಾಮೆ ನೀಡುವುದಾಗಿ ಇನ್‌ಸ್ಟಾಗ್ರಾಮ್ ನಲ್ಲಿ ಹೇಳಿಕೊಂಡಿದ್ದಾರೆ. ಇನ್ಸ್ಟಾಗ್ರಾಮ್‌ನಲ್ಲಿ ಹೀಗೆ ಬರೆದುಕೊಂಡಿದ್ದಾರೆ. "ನಾನು ನಾಳೆ ನನ್ನ ಕೆಲಸವನ್ನು ಬಿಡುತ್ತಿದ್ದೇನೆ. ಕೆಲಸ ಬಿಟ್ಟ ನಂತರ ಮುಂದೆ ಏನು ಮಾಡಬೇಕು ಎಂದು ತಿಳಿದಿಲ್ಲ. ನಾನು ಮಾಡುವ ಕೆಲಸವನ್ನು ನಾನು ದ್ವೇಷಿಸುತ್ತೇನೆ.

ನನ್ನ ಜೀವನದಲ್ಲಿ ಎದುರಿಸುತ್ತಿರುವ ಈ ಕೆಟ್ಟ ಕ್ಷಣವನ್ನು ದೂರು ಮಾಡುವೆ. ಆಸ್ಟ್ರೇಲಿಯಾದ ಎರಡು ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯಲು ಅರ್ಹತೆ ಪಡೆದಿದ್ದೇನೆ. ಆದರೆ ಅದನ್ನು ಬಿಟ್ಟು ಈ ಕೆಲಸಕ್ಕೆ ಬಂದೆ. ಎರಡನ್ನು ಜತೆಗೆ ಮುಂದುವರಿಸಲು ಸಾಧ್ಯವಿಲ್ಲ ಎಂದು ಒಂದನ್ನು ಆಯ್ಕೆ ಮಾಡಿಕೊಂಡೆ. ಇಂದು ನಾನು ಪೂರ್ಣಾವಧಿ ಕೆಲಸ ಮಾಡುತ್ತೇನೆ, ಆದರೆ ಅದು ನನಗೆ ಇಷ್ಟವಿಲ್ಲ. ಕೆಲಸ ನನಗೆ ತುಂಬಾ ಬೇಸರ ತಂದಿದೆ. ಈ ಕೆಲಸ ದೊಡ್ಡ ತಲೆನೋವು ನನಗೆ. ಇನ್ಮುಂದೆ ಇದನ್ನು ಮುಂದುವರಿಸಲು ಸಾಧ್ಯವಿಲ್ಲ. ಇದರಿಂದ ನನ್ನ ಸಮಯ ಕೂಡ ವ್ಯರ್ಥವಾಗಿದೆ. ಬೆಳಿಗ್ಗೆ 7:45ಕ್ಕೆ ಎದ್ದು , 10.00 ಗಂಟೆಯೊಳಗೆ ಆಫೀಸ್‌ಗೆ ಹೋಗಬೇಕು. ಇದು ನನಗೆ ದೊಡ್ಡ ಹಿಂಸೆ ನೀಡುತ್ತಿದೆ. ಹೀಗಾಗಿ ನನಗೆ ಹೆಚ್ಚು ಸಮಯ ಕೂಡ ಸಿಗುತ್ತಿಲ್ಲ. ಆದರೆ ಒಂದು ಕಡೆ ಭಯ ಕೂಡ ಆಗುತ್ತಿದೆ. ಸ್ಥಿರವಾದ ಕೆಲಸವಿಲ್ಲ ಹಾಗೂ ಆದಾಯವಿಲ್ಲ. ಮುಂದೆ ಹೇಗೆ ಎಂಬ ಯೋಚನೆ ಉಂಟಾಗಿದೆ. ಆದರೆ ಕೆಲಸ ಬಿಡುವುದು ನನಗೆ ಅನಿವಾರ್ಯ ಎಂದು ಅನ್ಮುಲ್ ಉತ್ತಯ್ಯ ಹೇಳಿದ್ದಾರೆ.

ಇನ್ನು ಮಗನ ಈ ನಿರ್ಧಾರದ ಬಗ್ಗೆ ಅನ್ಮುಲ್ ಉತ್ತಯ್ಯ ಅವರ ತಂದೆ -ತಾಯಿಗೆ ಖುಷಿ ತಂದಿಲ್ಲ. ಇನ್‌ಸ್ಟಾಗ್ರಾಮ್‌ನಲ್ಲಿ ಅನ್ಮುಲ್ ಉತ್ತಯ್ಯ ಅವರು ಈ ವಿಡಿಯೋ ಹಂಚಿಕೊಳ್ಳುವ ಮೊದಲು 10,000 ಫಾಲೋರ್ಸ್‌ಗಳನ್ನು ಹೊಂದಿದ್ದರು. ಇದೀಗ ಇನ್‌ಸ್ಟಾಗ್ರಾಮ್‌ನಲ್ಲಿ20 ಸಾವಿರ ಫಾಲೋರ್ಸ್‌ಗಳನ್ನು ಗಳಿಸಿದ್ದಾರೆ. ಈ ವಿಡಿಯೋ ಮಿಲಿಯನ್‌ಗಿಂತಲೂ ಹೆಚ್ಚು ವೀಕ್ಷಣೆಗಳನ್ನು ಗಳಿಸಿದೆ.

ಅವರು ಮೂರು ತಿಂಗಳ ಹಿಂದೆ ಇನ್‌ಸ್ಟಾಗ್ರಾಮ್‌ನಲ್ಲಿ ಕೆಲವೊಂದು ವಿಷಯಗಳ ಬಗ್ಗೆ ವಿಡಿಯೋವನ್ನು ಹಂಚಿಕೊಳ್ಳುತ್ತಿದ್ದರು. ಹಾಗಾಗಿ ಕೆಲಸವನ್ನು ಬಿಟ್ಟು ತಮ್ಮ ಪೂರ್ತಿ ಸಮಯನ್ನು ಇನ್ಸ್ಟಾಗ್ರಾಮ್‌ಗೆ ನೀಡಲು ಬಯಸಿದ್ದಾರೆ. ಇದೀಗ ಅನ್ಮುಲ್ ಉತ್ತಯ್ಯ ಅವರ ಈ ನಿರ್ಧಾರಕ್ಕೆ ಸಾಮಾಜಿಕ ಜಾಲತಾಣದಲ್ಲಿ ಮಿಶ್ರ ಕಮೆಂಟ್ ಬಂದಿದೆ. ಒಬ್ಬರು ಬೆಂಗಳೂರಿನಲ್ಲಿ ಶೀತ ಹಾಗೂ ಹವಾಮಾನ ವಾತಾವರಣ ಇದೆ.ಇದರ ಮಧ್ಯೆ ಇದೊಂದು ದುಃಖಕರ ವಿಚಾರ ಎಂದು ತಮಾಷೆಯಾಗಿ ಹೇಳಿದ್ದಾರೆ. ಅರ್ಪಿತಾ ಶರ್ಮಾ ಎಂಬುವವರು, ನನ್ನ ಕಡೆಯಿಂದ ಸಂಪೂರ್ಣ ಬೆಂಬಲ ಮತ್ತು ನಿಮಗೆ ದೊಡ್ಡ ಅಭಿನಂದನೆಗಳು ಎಂದು ಹೇಳಿದ್ದಾರೆ.

## ಸಂಚಾರ ಸಾಥಿ' ಆಪ್ ಕಡ್ಡಾಯ ಅಲ್ಲ, ಡಿಲೀಟ್ ಮಾಡಬಹುದು-ಕೇಂದ್ರ ಸರ್ಕಾರ ಸ್ಪಷ್ಟನೆ

**ನವದೆಹಲಿ** : ಮೊಬೈ ಲ್ ಫೋನ್ ಗಳಲ್ಲಿ ಸಂಚಾರ ಸಾಥಿ ಆಪ್ಲಿಕೇಶನ್ ಅ ನ್ಸಕ್ರಿಯಗೊಳಿ ಸುವುದು ಸಂಪೂರ್ಣ ವಾಗಿ ಕಡ್ಡಾಯವಲ್ಲ ಎಂದು ಕೇಂದ್ರ ಸರ್ಕಾರ ಮಂಗಳವಾರ ಸ್ಪಷ್ಟಪಡಿಸಿದೆ. ಕೇಂದ್ರ ದೂರಸಂಪರ್ಕ ಸಚಿವ ಶ್ರೀ ಜ್ಯೋತಿರಾದಿತ್ಯ ಸಿಂಧಿಯಾ ಅವರು ಇದನ್ನು ಖಚಿತಪಡಿಸಿದ್ದಾರೆ. ಫೋನ್ ತಯಾರಕರಿಗೆ ಈ ಆಪ್ಲಿಕೇಶನ್ ಅನ್ನು ಮೊದಲೇ ಇನ್ಸ್ಟಾಲ್ ಮಾಡುವಂತೆ ನೀಡಿದ ನಿರ್ದೇಶನಗಳಿಂದ ಉಂಟಾದ ಗೊಂದಲ ಮತ್ತು ವಿವಾದದ ನಡುವೆಯೇ ಕೇಂದ್ರ ಸರ್ಕಾರ ಈ ಸ್ಪಷ್ಟೀಕರಣ ನೀಡಿದೆ.

ಸಚಿವ ಸಿಂಧಿಯಾ ಅವರು ಹೇಳಿದರು, ಸಂಚಾರ ಸಾಥಿ ಅಪ್ಲಿಕೇಶನ್ ಅನ್ನು ಸಕ್ರಿಯಗೊಳಿಸುವುದು ಐಚ್ಛಿಕ. ಇದು ಕಡ್ಡಾಯವಲ್ಲ.ನಿಮಗೆ ಇಷ್ಟವಿದ್ದರೆ ಬಳಸಬಹುದು ಇಲ್ಲವಾದರೆ ಅದನ್ನ ಡಿಲೀಟ್ ಮಾಡಬಹುದು.



ಈ ಸ್ಪಷ್ಟೀಕರಣಕ್ಕೆ ಮುನ್ನ, ದೂರಸಂಪರ್ಕ ಇಲಾಖೆ (DoT) ಎಲ್ಲಾಸ್ಮಾರ್ಟ್ಫೋನ್ ತಯಾರಕರಿಗೂ ಹೊಸ ಮೊಬೈಲ್ ಸಾಧನಗಳಲ್ಲಿ ಸಂಚಾರ ಸಾಥಿ ಆಪ್ಲಿಕೇಶನ್ ಅನ್ನು ಪೂರ್ವ-ಇನ್ಸ್ಟಾಲ್ ಮಾಡುವಂತೆ ಆದೇಶಿಸಿತ್ತು. ಈಗಾಗಲೇ ಬಳಕೆಯಲ್ಲಿರುವ ಫೋನ್ಗಳು ಸಾಫ್ಟ್ವೇರ್ ನವೀಕರಣದ ಮೂಲಕ ಈ ಆಪ್ ಅನ್ನು ಪಡೆಯಲಿದ್ದವು.

ಈ ಸಂದರ್ಭದಲ್ಲಿ ಸಿಂಧಿಯಾ ಅವರು, ಈ ನಿರ್ದೇಶನದ ಹಿಂದಿನ ಏಕೈಕ ಉದ್ದೇಶ ಸೈಬರ್ ವಂಚನೆ ತಡೆಗಟ್ಟುವುದು ಮಾತ್ರ ಎಂದು ಸ್ಪಷ್ಟಪಡಿಸಿದರು. ಸೈಬರ್ ವಂಚನೆಯನ್ನು ನಿಗ್ರಹಿಸಲು ವಿನ್ಯಾಸಗೊಳಿಸಲಾದ ಈ ಸಾಧನಕ್ಕೆ (ಆಪ್ ಗೆ) ವ್ಯಾಪಕ ಪ್ರವೇಶ ಖಚಿತಪಡಿಸಿಕೊಳ್ಳುವುದೇ ನಮ್ಮ ಗುರಿ. ಇದರಿಂದ ನಾಗರಿಕರು ಸುರಕ್ಷಿತರಾಗಬೇಕು, ಎಂದರು. ಸರ್ಕಾರದ ಕಡೆಯಿಂದ ಬಳಕೆದಾರರ ಗೌಪ್ಯತೆಯನ್ನು ಉಲ್ಲಂಘಿಸುವ ಯಾವುದೇ ಉದ್ದೇಶವಿಲ್ಲ ಎಂದು ಅವರು ಖಾತರಿ ನೀಡಿದರು.

ಈ ಸ್ಪಷ್ಟೀಕರಣದಿಂದ, ಸಾಮಾನ್ಯ ಮೊಬೈಲ್ ಬಳಕೆದಾರರು ಈಗ ಸಂಚಾರ ಸಾಥಿ ಆಪ್ ಅನ್ನು ತಮ್ಮ ಇಷ್ಟದಂತೆ ನಿರ್ವಹಿಸಲು ಸ್ವತಂತ್ರರಾಗಿದ್ದಾರೆ. ನಿಮ್ಮ ಹೊಸ ಫೋನ್ನಲ್ಲಿ ಈ ಆಪ್ ಕಾಣಿಸಿಕೊಂಡರೆ, ಅದನ್ನು ನಿಷ್ಕ್ರಿಯಗೊಳಿಸಬಹುದು ಅಥವಾ ಸಂಪೂರ್ಣವಾಗಿ ಅಳಿಸಬಹುದು. ಆಪ್ ಅನ್ನು ಇನ್ಸ್ಟಾಲ್ ಮಾಡಿದ್ದರೆ ಬಳಸಬೇಕೆಂಬುದು ಕಡ್ಡಾಯವಲ್ಲ. ಈ ಆಪ್ಲಿಕೇಶನ್ ಮುಖ್ಯವಾಗಿ ಡುಪ್ಲಿಕೇಟ್/ಕಳ್ಳ ಐಎಮ್‌ಇಐ ಸಂಖ್ಯೆಯ ಫೋನ್ಗಳನ್ನು ಗುರುತಿಸಿ, ಸೈಬರ್ ಅಪರಾಧಗಳಿಂದ ನಾಗರಿಕರನ್ನು ರಕ್ಷಿಸುವ ಉದ್ದೇಶ ಹೊಂದಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.